56

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ॥ ವೈ.ಎ.ನಾರಾಯಣಸ್ವಾಮಿರವರು ಮಂಡಿಸಿರುವ ನಿಯಮ 72ರ ಸೂಚನೆಗೆ ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರ ಹೇಳಿಕೆ:**

* * *

ವಿಷಯ:- ಸರ್ಕಾರಿ ಪ್ರೌಢಶಾಲೆ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳಿಗೆ ಪದೋನ್ನತಿ ನೀಡಿ ಸುಮಾರು 9 ವರ್ಷಗಳಾಗಿದೆ. ಇದರಿಂದ ಸುಮಾರು ಅರ್ಹ ಸಹ ಶಿಕ್ಷಕರು ಪದೋನ್ನತಿ ಪಡೆಯದೆ ನಿರಾಶರಾಗಿದ್ದಾರೆ, ಇದು ಬಹಳ ಗಂಭಿರವಾಗಿದ್ದು ಇದನ್ನು ಸರಿಪಡಿಸಲು ಮಾನ್ಯ ಶಾಲಾ ಶಿಕ್ಷಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಸರ್ಕಾರಿ ಪ್ರೌಢ ಶಾಲಾ ಶಿಕ್ಷಕರುಗಳಿಗೆ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡಲು ಈ ಕೆಳಗಿನ ಕಾರಣಗಳಿಂದಾಗಿ ವಿಳಂಬವಾಗಿರುತ್ತದೆ:

1. 2014ರಲ್ಲಿ ಕಲ್ಯಾಣ ಕರ್ನಾಟಕ ಅಧಿಸೂಚನೆ ಹೊರಡಿಸಲಾಗಿದ್ದರಿಂದ ಉಪನ್ಯಾಸಕರ ಜೇಷ್ಠತಾ ಪಟ್ಟಿ ತಯಾರಿಸುವುದು, ನಂತರ ವ್ಯಕ್ತಿಗಳ ಸಮರ್ಪಕ ಹಂಚಿಕೆ ಸಂಬಂಧಿಸಿದ ಕಾರ್ಯ ನಿರ್ವಹಣೆಯಿಂದಾಗಿ;

2. ಬಿ.ಕೆ.ಪವಿತ್ರ ಪ್ರಕರಣ 1 ಮತ್ತು 2ರಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪಿನನ್ವಯ ಸರ್ಕಾರದ ಆದೇಶ ದಿನಾಂಕ: 06-05-2017 ಮತ್ತು 15-05-2019ರಂತೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕ ವೃಂದ ಸೇರಿದಂತೆ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸುವ ಕಾರ್ಯ ಹಾಗೂ ಹಿಂಬಡ್ತಿ ಮತ್ತು ಮುಂಬಡ್ತಿ ಪ್ರಕ್ರಿಯೆ ಸಂಬಂಧಿಸಿದ ಕಾರ್ಯಗಳನ್ನು ನಿರ್ವಹಿಸಿದ ಹಿನ್ನೆಲೆಯಿಂದಾಗಿ;

3. ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಕಛೇರಿ ಕೆಲಸಗಳಲ್ಲಿ ಉಂಟಾದ ಅಡಚಣೆಯಿಂದ;

4. ಸಾರ್ವಜನಿಕ ಶಿಕ್ಷಣ ಇಲಾಖೆಯ ನಾಲ್ಕು ವಿಭಾಗಗಳಲ್ಲಿನ ಸ್ನಾತಕೋತ್ತರ ಪದವಿ ಪಡೆದಿರುವ ಅರ್ಹ ಪ್ರೌಢಶಾಲಾ ಸಹ ಶಿಕ್ಷಕರ ನಾಲ್ಕು ವಿಭಾಗಗಳು ಸೇರಿದಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆರವರಿಂದ ಪಡೆದು ಪರಿಶೀಲಿಸಿ, ಕ್ರಮಕೈಗೊಳ್ಳಲಾಗುತ್ತಿದ್ದು;

5. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೇನೆನಿ 2021 ದಿನಾಂಕ: 10-12-2021ರಲ್ಲಿನ ಮಾರ್ಗಸೂಚಿಗಳನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳನ್ನು ಭರ್ತಿ ಮಾಡುವಾಗ (ನೇರ ಮತ್ತು ಬಡ್ತಿ) ರಿಕ್ತ ಸ್ಥಾನ ಆಧಾರಿತ ವರ್ಗೀಕರಣದ ಬದಲಾಗಿ ಹುದ್ದೆ ಆಧಾರಿತ ವರ್ಗೀಕರಣವನ್ನು ಅನುಸರಿಸಲು ಕ್ರಮ ವಹಿಸಲಾಗುತ್ತಿದೆ.

2014ರ ವೃಂದ ಮತ್ತು ನೇಮಕಾತಿ ನಿಯಮದಂತೆ ಪ್ರೌಢಶಾಲಾ ಸಹ ಶಿಕ್ಷಕರಿಗೆ ಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:DPUE-EST10LTPR/1/2023 ದಿನಾಂಕ:28-04-2023ರಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ನಾಲ್ಕು ವಿಭಾಗಗಳಲ್ಲಿನ ಸ್ನಾತಕೋತ್ತರ ಪದವಿ ಪಡೆದಿರುವ ಅರ್ಹ ಪ್ರೌಢಶಾಲಾ ಸಹ ಶಿಕ್ಷಕರ ನಾಲ್ಕು ವಿಭಾಗಗಳು ಸೇರಿದಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ನೀಡುವಂತೆ ಆಯುಕ್ತರು ಸಾರ್ವಜನಿಕ ಶಿಕ್ಷಣ ಇಲಾಖೆರವರನ್ನು ಕೋರಲಾಗಿದೆ. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಂದ ಅಂತಿಮ ಜೇಷ್ಠತಾ ಪಟ್ಟಿಯನ್ನು ಪಡೆದು ತ್ವರಿತವಾಗಿ ಪರಿಶೀಲಿಸಿ, ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.

(ಎಸ್. ಮಧು ಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

ಸಂಖ್ಯೆ: ಇಪಿ 122 ಡಿಜಿಡಬ್ಲ್ಯೂ 2023